## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಬಿ.ರೇವಣ್ಣ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿಗ್ಗಾವಿ(ಪ್ರಸ್ತುತ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಗದಗ) ಇವರ ವಿರುದ್ಧದ ಇಲಾಖಾ ವಿಚಾರಣೆ- ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯವರ ನೇಮಕಮಾಡುವ ಬಗ್ಗೆ ಆದೇಶ.

ಓದಲಾಗಿದೆ:-1. ಅಪರ ಪೋಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರ ಪತ್ರ ಸಂಖ್ಯೆ:ಲೋಕ್/ಐಎನ್‌ವಿ(ಜಿ)/ಇತರೆ/ಹಾವೇರಿ/2012, ದಿನಾಂಕ: 06-11-2012.

2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಹಾವೇರಿ ಇವರ ಪತ್ರ ಸಂಖ್ಯೆ:ಹಾಜಿಪಂ/ಆಡಳಿತ -2 /ಗ್ರಾಪಂ/ಇಬಿ/ಸಿಬ್ಬಂದಿ/ವಹಿ-8/12-13/5: ದಿನಾಂಕ: 30-03-2013, 14-08-2013 ಮತ್ತು 29-03-2014

3. ಸರ್ಕಾರದ ಸಮ ಸಂಖ್ಯೆಯ ಕಾರಣ ಕೇಳುವ ನೋಟೀಸ್ ದಿನಾಂಕ: 27-12-2013

4. ಶ್ರೀ ಬಿ.ರೇವಣ್ಣ, ಹಿಂದಿನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿಗ್ಗಾವಿ(ಪ್ರಸ್ತುತ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಗದಗ ರವರ ಲಿಖಿತ ರಕ್ಷಣಾ ಹೇಳಿಕೆ ದಿನಾಂಕ:07.01.2014

****

**ಪ್ರಸ್ತಾವನೆ:**

ಹಾವೇರಿ ಜಿಲ್ಲೆ ಶಿಗ್ಗಾವಿ ತಾಲ್ಲೂಕಿನ ಮುಗಳಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕೆರೆ ಹೂಳೆತ್ತುವ ಕಾಮಗಾರಿ ಅನುಷ್ಠಾನದಲ್ಲಿ ಅವ್ಯವಹಾರಗಳ ಕುರಿತು ಶಿಗ್ಗಾವಿ ತಾಲ್ಲೂಕು ಪಂಚಾಯತ್‌ನ ಅಂದಿನ ಕಾರ್ಯನಿರ್ವಾಹಕ ಅಧಿಕಾರಿಯಾದ ಶ್ರೀ ಬಿ.ರೇವಣ್ಣ, ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ ನಿಯಮಾವಳಿಗಳು 1957ರ ನಿಯಮ 11 ರ ಪ್ರಕಾರ ಮೇಲೆ (3)ರಲ್ಲಿ ಓದಲಾದ ದಿನಾಂಕ:27.12.2013ರಂದು ಕಾರಣ ಕೇಳುವ ನೋಟೀಸ್ಸಿನೊಂದಿಗೆ ಅನುಬಂಧ 1-4 ನ್ನು ಜಾರಿಮಾಡಿ ರಕ್ಷಣಾ ಹೇಳಿಕೆಯನ್ನು ಸಲ್ಲಿಸಲು ಸೂಚಿಸಲಾಗಿತ್ತು. ಸದರಿ ಅಧಿಕಾರಿಯು ಮೇಲೆ (4) ರಲ್ಲಿ ಓದಲಾದ ದಿನಾಂಕದಂದು, ಅವರ ಲಿಖಿತ ಹೇಳಿಕೆಯನ್ನು ಸಲ್ಲಿಸಿ ಅವರ ವಿರುದ್ಧದ ಎಲ್ಲಾ ಆರೋಪಗಳನ್ನು ಅಲ್ಲಗಳೆಯುತ್ತಾ, ತಮ್ಮ ಮೇಲಿನ ಉದ್ದೇಶಿತ ಇಲಾಖಾ ವಿಚಾರಣೆಯನ್ನು ಕೈಬಿಡುವಂತೆ ಕೋರಿರುತ್ತಾರೆ. ಸದರಿ ಅಧಿಕಾರಿಯು ನೀಡಿರುವ ರಕ್ಷಣಾ ಹೇಳಿಕೆಯನ್ನು ಪರಿಶೀಲಿಸಿದ್ದು, ಅಧಿಕಾರಿಯು ನೀಡಿರುವ ಉತ್ತರವು

ಸಮರ್ಥನೀಯವಾಗಿಲ್ಲವೆಂದು ಇರುವುದರಿಂದ, ಆರೋಪಗಳ ಸತ್ಯಾಸತ್ಯೆಯನ್ನು ತಿಳಿಯಲು ವಿವರವಾದ ವಿಚಾರಣೆಯನ್ನು ನಡೆಸಲು, ವಿಚಾರಣಾಧಿಕಾರಿ ಹಾಗೂ ಮಂಡನಾಧಿಕಾರಿಯನ್ನು ನೇಮಿಸಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 566 ಪಬಿವ 2012 ಬೆಂಗಳೂರು**
**ದಿನಾಂಕ:15-05-2014**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಶ್ರೀ ಬಿ.ರೇವಣ್ಣ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಶಿಗ್ಗಾವಿ (ಪ್ರಸ್ತುತ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಗದಗ) ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ), ನಿಯಮಾವಳಿಗಳು 1957ರ ನಿಯಮ 11ರ ಪ್ರಕಾರ ಇಲಾಖಾ ವಿಚಾರಣೆಯನ್ನು ನಡೆಸಲು, ಸದರಿ ನಿಯಮಾವಳಿಗಳ ನಿಯಮ -11 (2) ರ ಅನುಸಾರ ಶ್ರೀ ಎಸ್.ಸಿ.ಗುಡ್ಡಾಕಾರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ಅದೇ ನಿಯಮಾವಳಿಗಳ ನಿಯಮ-11(5)(ಸಿ)ರ ಪ್ರಕಾರ ಸಹಾಯಕ ಕಾರ್ಯದರ್ಶಿ, (ಆಡಳಿತ) ಜಿಲ್ಲಾ ಪಂಚಾಯತ್, ಹಾವೇರಿ ಇವರನ್ನು ಮಂಡನಾಧಿಕಾರಿಯನ್ನಾಗಿ ಸರ್ಕಾರವು ನೇಮಿಸಿದೆ.

ವಿಚಾರಣಾಧಿಕಾರಿಯವರು ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ), ನಿಯಮಾವಳಿಗಳು-1957ರ ನಿಯಮ-11ರಲ್ಲಿ ನಿಗದಿ ಪಡಿಸಿರುವ ಕಾರ್ಯವಿಧಾನದ ಪ್ರಕಾರ ಜರುಗಿಸಿ ವಿಚಾರಣಾ ವರದಿಯನ್ನು 4 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

(ಚಂದ್ರಶೇಖರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ,
1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ/ಗದಗ

4) ಶ್ರೀ ಫ.ಸಿ.ಗುಡ್ಡಾಕಾರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಧಾರವಾಡ.
5) ಜಿಲ್ಲಾಧಿಕಾರಿಗಳು, ಹಾವೇರಿ & ಗದಗ ಜಿಲ್ಲೆ.-
6) ಸಹಾಯಕ ಕಾರ್ಯದರ್ಶಿ,(ಆಡಳಿತ) ಜಿಲ್ಲಾ ಪಂಚಾಯತ್, ಹಾವೇರಿ ಜಿಲ್ಲೆ.

ಪ್ರತಿ ಮಾಹಿತಿಗಾಗಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ (ಪಂ.ರಾಜ್)/ ಅಪರ ಕಾರ್ಯದರ್ಶಿ (ಆಡಳಿತ) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

